# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | :24(65) |
| ಸದಸ್ಯರ ಹೆಸರು | : ಶ್ರೀ ಹೆಚ್.ಎಸ್. ಗೋಪಿನಾಥ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : 13.02.2023 |
| ಉತ್ತರಿಸಬೇಕಾದ ಸಚಿವರು | : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಖಾಸಗಿ ಶಾಲೆಗಳ ಸಂಖ್ಯೆ ಎಷ್ಟು; ಇಲ್ಲಿ ಯಾವ ಯಾವ ಪಠ್ಯಕ್ರಮವನ್ನು ಬೋಧಿಸಲಾಗುವುದು; (ಸಂಪೂರ್ಣ ಮಾಹಿತಿ ಒದಗಿಸುವುದು) | ಬೆಂಗಳೂರು ನಗರ ಜಿಲ್ಲೆಯಲ್ಲಿ ಒಟ್ಟು ಖಾಸಗಿ ಶಾಲೆಗಳ ಸಂಖ್ಯೆ: 3894 ಈ ಶಾಲೆಗಳಲ್ಲಿ ರಾಜ್ಯ ಪಠ್ಯಕ್ರಮ, ಸಿ.ಬಿ.ಎಸ್.ಇ, ಐ.ಸಿ.ಎಸ್.ಇ ಮತ್ತು ಐ.ಜಿ.ಸಿ.ಎಸ್.ಇ ಪಠ್ಯ ಕ್ರಮಗಳನ್ನು ಬೋಧಿಸಲಾಗುತ್ತಿದೆ. |
| ಆ) | ಖಾಸಗಿ ಶಾಲೆಗಳನ್ನು ಸ್ಥಾಪಿಸಲು ಸರ್ಕಾರ ರೂಪಿಸಿರುವ ಮಾನದಂಡಗಳೇನು; | ಖಾಸಗಿ ಅನುದಾನ ರಹಿತ ಶಾಲೆಗಳನ್ನು ಪ್ರಾರಂಭಿಸಲು ಕರ್ನಾಟಕ ಶಿಕ್ಷಣ ಕಾಯ್ದೆ 1983ರಡಿ ನಿಯಮಾವಳಿಗಳನ್ನು 1995ರಲ್ಲಿ ರೂಪಿಸಲಾಗಿದೆ ನಂತರ ಈ ನಿಯಮಗಳಿಗೆ ತಿದ್ದುಪಡಿಗಳನ್ನು ತಂದು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 709 ಪಿಜಿಸಿ 2017, ದಿನಾಂಕ: 08/03/2018ರಲ್ಲಿ ನಿಯಮಗಳನ್ನು ರೂಪಿಸಲಾಗಿದೆ. ಅದರಂತೆ, ಇಲಾಖೆಯು ಐ.ಟಿ ಪೋರ್ಟಲ್ ಪ್ರಾರಂಭಿಸಿದ್ದು ಅದರಲ್ಲಿ ಅರ್ಹ ಆಡಳಿತ ಮಂಡಳಿಗಳು ಅರ್ಜಿ ಸಲ್ಲಿಸಬಹುದಾಗಿರುತ್ತದೆ.<br><br>ಸುರಕ್ಷತಾ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದಂತೆ ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 43 ಪಿಜಿಸಿ 2022, ದಿನಾಂಕ: 18.05.2022 ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಲೋಇ/59/ಬಿಇಡಿ-2019, ದಿನಾಂಕ: 06.05.2022 ಮತ್ತು ಸ್ಥಾಯಿ ಆದೇಶ ಸಂಖ್ಯೆ:156-ಎ ರ ಸಂಖ್ಯೆ: ಜಿಬಿಸಿ(2)044-2020-21, ದಿನಾಂಕ:25-01-2022 ರಲ್ಲಿ ಕ್ರಮವಾಗಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಲೋಕೋಪಯೋಗಿ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತುಸೇವೆಗಳ ಇಲಾಖೆಗಳು ಹೊರಡಿಸಿರುವ ಮಾರ್ಗಸೂಚಿಯಲ್ಲಿನ ನಿಯಮಗಳಂತೆ ಪ್ರಮಾಣ ಪತ್ರಗಳನ್ನು ಪಡೆಯುವುದೂ ಸಹ ಕಡ್ಡಾಯಗೊಳಿಸಲಾಗಿದೆ. |

| | | |
|---|---|---|
| ಇ) | ಇತ್ತೀಚೆಗೆ ಬೆಂಗಳೂರು ನಗರ ಜಿಲ್ಲೆಗಳಲ್ಲಿ ಖಾಸಗಿ ಶಾಲೆಗಳಲ್ಲಿ ಪ್ರವೇಶಾತಿ ಪಡೆಯುವ ಸಂದರ್ಭದಲ್ಲಿ ಸಿ.ಬಿ.ಎಸ್.ಇ ಪಠ್ಯಕ್ರಮಕ್ಕನುಗುಣವಾಗಿ ಬೋಧಿಸುತ್ತೇವೆ ಎಂದು ತಿಳಿಸಿ ನಂತರ ರಾಜ್ಯ ಪಠ್ಯಕ್ರಮ ಪರೀಕ್ಷೆಗಳನ್ನು ನಡೆಸಿ ವಂಚನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಅಂತಹ ಶಾಲೆಗಳ ವಿರುದ್ಧ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು: | ಬಂದಿದೆ.<br><br>ಬೆಂಗಳೂರು ನಗರ ಜಿಲ್ಲೆಯಲ್ಲಿ ಇತ್ತೀಚೆಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರುಗಳು ನೀಡಿರುವ ವರದಿಯಂತೆ 89 ಶಾಲೆಗಳು ಪಠ್ಯಕ್ರಮ ಬದಲಿಸಿ ಬೋಧಿಸುತ್ತಿರುವುದಾಗಿ ವರದಿ ನೀಡಿರುತ್ತಾರೆ. |
| ಈ) | ಮಾನ್ಯತೆ ಪಡೆಯದೆಯೇ ಸಿ.ಬಿ.ಎಸ್.ಇ. ಪಠ್ಯವನ್ನು ಅನಧಿಕೃತವಾಗಿ ಬೋಧನೆ ಮಾಡಿದ ಖಾಸಗಿ ಶಾಲೆಗಳ ವಿರುದ್ಧ ಸರ್ಕಾರ ಯಾವ ಯಾವ ಕ್ರಮವನ್ನು ಕೈಗೊಂಡಿದೆ? (ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿನ ಕೆಲವು ಖಾಸಗಿ ಶಾಲೆಗಳು ರಾಜ್ಯಪಠ್ಯಕ್ರಮಕ್ಕೆ ಅನುಮತಿಯನ್ನು ಪಡೆದು ಕೇಂದ್ರ ಪಠ್ಯಕ್ರಮ ಬೋಧಿಸುತ್ತಿರುವುದು ಕಂಡುಬಂದಿದ್ದು ಇದನ್ನು ಗುರುತಿಸುವ ಸಂಬಂಧ ತಂತ್ರಾಂಶವನ್ನು ರೂಪಿಸಲಾಗುತ್ತಿದ್ದು, ಖಾಸಗಿ ಶಾಲೆಗಳ ಎಲ್ಲಾ ಮಾಹಿತಿಗಳನ್ನು ಇಂದೀಕರಿಸುವ ಸಂಬಂಧ ಸುತ್ತೋಲೆ ಹೊರಡಿಸಲಾಗುತ್ತಿದೆ.<br><br>ರಾಜ್ಯ ಪಠ್ಯಕ್ರಮದಲ್ಲಿ ಅನುಮತಿ ಪಡೆದು ಇತರೆ ಪಠ್ಯಕ್ರಮ ಬೋಧನೆ ಮಾಡುತ್ತಿರುವ ಶಾಲೆಗಳನ್ನು ಗುರುತಿಸಿ ಅಂತಹ ಶಾಲೆಗಳ ವಿರುದ್ಧ ಕರ್ನಾಟಕ ಶಿಕ್ಷಣ ಕಾಯ್ದೆ -1983ರ ಕಲಂ 123ರಡಿಯಲ್ಲಿ ಸ್ಥಳೀಯ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿ ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಜಿಲ್ಲಾ ಉಪನಿರ್ದೇಶಕರುಗಳಿಗೆ ಸೂಚಿಸಲಾಗಿದೆ. |

ಸಂಖ್ಯೆ: ಇಪಿ 62 ಪಿಜಿಸಿ 2023

**(ಬಿ.ಸಿ.ನಾಗೇಶ್)**
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು.